ಕರ್ನಾಟಕ ವಿಧಾನ ಸಭೆ

ಬುಧವಾರ 31 ನೇ ಜುಲೈ 1996 ರಂದು ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10-10 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು (ರಮೇಶ್ ಕುಮಾರ್) ಅವರು ಪೀಠವನ್ನು ಅಲಂಕರಿಸಿದ್ದರು.

(ಪ್ರಶ್ನೋತ್ತರಗಳು)

(ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು)

ವಿಷಯ :- ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳು.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 257 (135)

ಶ್ರೀ ಯು. ಬಿ. ಬಣಕಾರ್ (ಹಿರೇಕೆರೂರು) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಅವುಗಳನ್ನು ತುಂಬಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ? ಹಾಗಿದ್ದಲ್ಲಿ ಯಾವಾಗ ತೆಗೆದುಕೊಳ್ಳಲಾಗುವುದು.

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :-

ಅ) ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಟ್ಟು 3519 ಹುದ್ದೆಗಳು ಖಾಲಿ ಇದೆ.

ಆ) ಸದ್ಯದಲ್ಲಿಯೇ ಎಲ್ಲಾ ಶಿಕ್ಷಕರ ಹುದ್ದೆಗಳನ್ನು ತುಂಬಲಾಗುವುದು.

ಶ್ರೀ ಯು. ಬಿ. ಬಣಕಾರ್ :- ಮಾನ್ಯ ಅಧ್ಯಕ್ಷರೆ, ಇವೊತ್ತು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಕೊಡುತ್ತಿರುವ ಶಿಕ್ಷಣ ಯಾವ ರೀತಿಯದ್ದಾಗಿಯೆಂಬುದು ತಮಗೆ ಗೊತ್ತಿದೆ. ಏಕೆಂದರೆ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಇವೊತ್ತು ಶಿಕ್ಷಕರಿಲ್ಲ. ನಾನು ಕೇಳಿರುವ ಪ್ರಶ್ನೆಗಳಿಗೆ ಮಾನ್ಯ ಸಚಿವರು ಉತ್ತರಿಸುತ್ತಾ, ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಟ್ಟು 8519 ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳಲ್ಲಿ

ಸಧ್ಯದಲ್ಲಿಯೇ ತುಂಬಲಾಗುವುದು ಎಂದು ತಿಳಿಸಿದ್ದಾರೆ. ಬಹುಶಃ ಇದೇ ಅಧಿವೇಶನದಲ್ಲಿ ಮಾನ್ಯ ಸದಸ್ಯರಾದ ಎಸ್. ಎಂ. ನಾಗರಾಜ್‌ರವರು ಹತ್ತನೇ ತಾರೀಖಿನಂದು ಕೇಳಿರುವಂಥ ಪ್ರಶ್ನೆಗೆ ಉತ್ತರಿಸುತ್ತಾ, ಪ್ರೌಢಶಾಲಾ ಶಿಕ್ಷಕರನ್ನು 1996 ನೇ ಇಸವಿಯಲ್ಲಿ ನೇಮಕಾತಿ ಮಾಡಲು ಸರ್ಕಾರ ಅನುಮತಿ ನೀಡಿದ್ದು, ನೇಮಕಾತಿಯು ವಿಭಾಗ ಮಟ್ಟದಲ್ಲಿದ್ದು ಪ್ರಕ್ರಿಯೆ ಪ್ರಾರಂಭವಾಗಿದೆಯೆಂದು, ಆಗಸ್ಟ್ ತಿಂಗಳ ಅಂತ್ಯದೊಳಗೆ ನೇಮಕಾತಿ ಕಾರ್ಯ ಪೂರೈಸಲಾಗುವುದೆಂದು ತಿಳಿಸಿದ್ದಾರೆ. ಆದರೆ, ಈಗ ಆಗಸ್ಟ್ ತಿಂಗಳು ಪ್ರಾರಂಭವಾಗುತ್ತಿರುವಾಗ ಹುದ್ದೆಗಳನ್ನು ಸಧ್ಯದಲ್ಲಿಯೇ ತುಂಬಲಾಗುವುದೆಂದು ಮಾನ್ಯ ಸಚಿವರು ಉತ್ತರಿಸಿರುವುದರಿಂದ ಎಷ್ಟು ದಿವಸಗಳಲ್ಲಿ ಸದರಿ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೆಂದು ನಿರ್ದಿಷ್ಟವಾಗಿ ದಯಮಾಡಿ ತಿಳಿಸಬೇಕೆಂದು ಕೇಳಬಯಸುತ್ತೇನೆ.

ಶ್ರೀ ಹೆಚ್. ಜಿ. ಗೋವಿಂದೇಗೌಡ :- ಮಾನ್ಯ ಅಧ್ಯಕ್ಷರೇ, ಪ್ರೌಢಶಾಲೆಗಳಿಗೆ ಉಪಾಧ್ಯಾಯರುಗಳನ್ನು ನೇಮಕ ಮಾಡಲು ಸುಮಾರು ಎಂಟು ತಿಂಗಳುಗಳಿಂದಲೂ ಪ್ರಕ್ರಿಯೆ ಸಾಗುತ್ತಿದ್ದು, ನೇಮಕಾತಿಗೆ ಅಭ್ಯರ್ಥಿಯ ವಯಸ್ಸು ಮತ್ತು ಕೆಲವಾರು ಕುಂದು-ಕೊರತೆಗಳಿರುವುದರಿಂದ ಅದನ್ನು ನಿವಾರಿಸಿಕೊಂಡು ಈಗ ಇನ್ನೊಂದು ಹಂತದಲ್ಲಿದ್ದು, ರಾಜ್ಯದ ಪ್ರೌಢಶಾಲೆಗಳಲ್ಲಿ ಉಪಾಧ್ಯಾಯರ ಕೊರತೆಯೇನಿದೆ, ಆ ಕೊರತೆಯನ್ನು ನೀಗಿಸಲು ಉಪಾಧ್ಯಾಯರುಗಳನ್ನು ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಸಾಗಿದೆ. ಇನ್ನೂ ಒಂದೂವರೆ ತಿಂಗಳಿನಲ್ಲಿ ಶಿಕ್ಷಕರುಗಳನ್ನು ನೇಮಕ ಮಾಡಿಕೊಳ್ಳಲು ಪ್ರಯತ್ನಿಸುತ್ತೇನೆ.

ವಿಷಯ :- ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು.

ಚುಕ್ಕಿ ಗುರುತಿನ ಪ್ರಶ್ನೆ ಸಂಖ್ಯೆ 258 (31)

ಶ್ರೀ ಕೆ. ಜಯರಾಮ ಶೆಟ್ಟಿ (ಉಳ್ಳಾಲ) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ? (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಆರೋಗ್ಯ ಕೇಂದ್ರಗಳಿಲ್ಲದ ಗ್ರಾಮಗಳು ಇವೆಯೇ? ಹಾಗಿದ್ದಲ್ಲಿ ಕಾರಣಗಳೇನು?

ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು? ವಿವರ ನೀಡುವುದು.

ಈ) ಈಗಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಜನರಿಗೆ ಅನುಕೂಲ ಕಲ್ಪಿಸುವ ವಿಚಾರ ಸರ್ಕಾರದ ಮುಂದಿದೆಯೇ?